# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 187
ಸದಸ್ಯರ ಹೆಸರು : ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ಸಚಿವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು
ಉತ್ತರಿಸುವ ದಿನಾಂಕ : 14.12.2021

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದ ವತಿಯಿಂದ ಅಂಗನವಾಡಿಗಳನ್ನು ತೆರೆಯಲು ನಿಗದಿಪಡಿಸಿರುವ ಮಾನದಂಡಗಳೇನು; ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಅಂಗನವಾಡಿಗಳ ವಿವರ ನೀಡುವುದು; ಈ ಅಂಗನವಾಡಿಗಳಲ್ಲಿ ಪ್ರಸ್ತುತ ದಾಖಲಾಗಿರುವ ಮಕ್ಕಳ ಸಂಖ್ಯೆ ಎಷ್ಟು; ಈ ಅಂಗನವಾಡಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; (ಅಂಗನವಾಡಿವಾರು ಮಾಹಿತಿ ನೀಡುವುದು) | ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ, 1000 ಜನಸಂಖ್ಯೆ ಹೊಂದಿರುವ ನಗರ ಅಥವಾ ಗ್ರಾಮೀಣ ಪ್ರದೇಶದಲ್ಲಿ, ಒಂದು ಮುಖ್ಯ ಅಂಗನವಾಡಿ ಕೇಂದ್ರವನ್ನು ಸ್ಥಾಪಿಸಲು ಅವಕಾಶವಿರುತ್ತದೆ ಅದರಂತೆ 700 ಜನಸಂಖ್ಯೆಗೆ ಗುಡ್ಡಗಾಡು ಪ್ರದೇಶದಲ್ಲಿ ಒಂದು ಅಂಗನವಾಡಿ ಕೇಂದ್ರವನ್ನು ಸ್ಥಾಪಿಸಲು ಅವಕಾಶವಿರುತ್ತದೆ. 500 ಜನ ಸಂಖ್ಯೆ ಹೊಂದಿರುವ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಒಂದು ಮಿನಿ ಅಂಗನವಾಡಿ ಕೇಂದ್ರವನ್ನು ಹಾಗೂ 300 ಜನಸಂಖ್ಯೆ ಹೊಂದಿರುವ ಗುಡ್ಡಗಾಡು ಪ್ರದೇಶದಲ್ಲಿ ಒಂದು ಮಿನಿ ಅಂಗನವಾಡಿ ಕೇಂದ್ರವನ್ನು ಸ್ಥಾಪಿಸಲು ಅವಕಾಶವಿರುತ್ತದೆ.<br><br>ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಟ್ಟು 1825 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗಿರುವ ಒಟ್ಟು ಮಕ್ಕಳ ಸಂಖ್ಯೆ :59939 ಮತ್ತು ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ 1772 ಸಹಾಯಕಿಯರ ಸಂಖ್ಯೆ 1615 ಆಗಿದ್ದು, ಅಂಗನವಾಡಿವಾರು ಮಾಹಿತಿಯನ್ನು ಅನುಬಂಧ-1ರಲ್ಲಿ ಒದಗಿಸಿದೆ. |
| ಆ) | ಅಂಗನವಾಡಿ ಕಾರ್ಯಕರ್ತೆಯರು ಮತ್ತು ಅವರ ಸಹಾಯಕರಿಗೆ (ಆಯಾಗಳು) ನಿಗಧಿಪಡಿಸಿರುವ ಕೆಲಸ ಕಾರ್ಯಗಳೇನು; ಅಂಗನವಾಡಿಯ ಕೆಲಸಗಳನ್ನು ಹೊರತುಪಡಿಸಿ ಇತರೆ ಯಾವ ಕೆಲಸಗಳನ್ನು ಇವರಿಗೆ ವಹಿಸಲಾಗುತ್ತಿದೆ; (ಮಾಹಿತಿ ನೀಡುವುದು) | ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ನಿಗದಿಪಡಿಸಿರುವ ಕೆಲಸ ಕಾರ್ಯಗಳ ಮಾಹಿತಿಯನ್ನು ಅನುಬಂಧ-2ರಲ್ಲಿ ಒದಗಿಸಿದೆ.<br><br>ಅಂಗನವಾಡಿಯ ಕೆಲಸಗಳನ್ನು ಹೊರತುಪಡಿಸಿ ಇತರೆ ಯಾವ ಕೆಲಸಗಳನ್ನು ವಹಿಸದಿರಲು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. |

<table>
<tr>
<td>ಇ)</td>
<td>ಅಂಗವನಾಡಿ ಕಾರ್ಯಕರ್ತೆಯರು ಮತ್ತು ಅವರ ಸಹಾಯಕರಿಗೆ (ಆಯಾಗಳು) ನಿಗಧಿಪಡಿಸಿರುವ ಮಾಸಿಕ ಸಂಬಳ ಮತ್ತು ಇತರೆ ಭತ್ಯೆಗಳ ವಿವರ ನೀಡುವುದು;<br>ನಿಯಮಾನುಸಾರ ಪ್ರತಿ ಮಾಹೆ ಇವರಿಗೆ ಸಂಬಳ ಮತ್ತು ಇತರೆ ಭತ್ಯೆಗಳನ್ನು ಪಾವತಿಸಲಾಗುತ್ತಿದೆಯೇ? (ಮಾಹಿತಿ ನೀಡುವುದು)</td>
<td>ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ ಕೇಂದ್ರ ಸರ್ಕಾರವು ಗೌರವಧನವನ್ನು ನಿಗಧಿಪಡಿಸಿದ್ದು, ಅದರಂತೆ ಪಾವತಿಸಲಾಗುತ್ತಿ ಇದಲ್ಲದೇ ರಾಜ್ಯ ಸರ್ಕಾರವೂ ಸಹ ಹೆಚ್ಚುವರಿಯಾಗಿ ಗೌರವಧನವನ್ನು ಪಾವತಿಸುತ್ತಿ ಪ್ರಸ್ತುತ ಪಾವತಿಸುತ್ತಿರುವ ಗೌರವಧನದ ವಿವರ ಈ ಕೆಳಕಂಡಂತಿದೆ.<br>(ರೂ. ಗಳಲ್ಲಿ)<br><table>
<tr><th>ಕ್ರ. ಸಂ</th><th>ವಿವರ</th><th>ಕೇಂದ್ರ ಸರ್ಕಾರದಿಂದ ನಿಗದಿಪಡಿಸಿರುವ ಗೌರವ ಧನ</th><th>ಕೇಂದ್ರ ಸರ್ಕಾರದ ಪಾಲು</th><th>ರಾಜ್ಯ ಸರ್ಕಾರದ ಪಾಲು</th><th>ರಾಜ್ಯ ಸರ್ಕಾರ ದಿಂದ ನೀಡುತ್ತಿ ರುವ ಹೆಚ್ಚುವರಿ ಗೌರವಧನ</th><th>ಒಟ್ಟು</th><th>ರಾಜ್ಯ ಸರ್ಕಾರದಿಂದ ನೀಡುತ್ತಿರುವ ಒಟ್ಟು ಗೌರವಧನ</th></tr>
<tr><td>1</td><td>ಅಂಗನವಾಡಿ ಕಾರ್ಯಕರ್ತೆ</td><td>4500</td><td>2700</td><td>1800</td><td>5500</td><td>10000</td><td>7300</td></tr>
<tr><td>2</td><td>ಅಂಗನವಾಡಿ ಸಹಾಯಕಿ</td><td>2500</td><td>1500</td><td>1000</td><td>2750</td><td>5250</td><td>3750</td></tr>
<tr><td>3</td><td>ಮಿನಿ ಅಂಗನವಾಡಿ ಕಾರ್ಯಕರ್ತೆ</td><td>3500</td><td>2100</td><td>1400</td><td>2750</td><td>6250</td><td>4150</td></tr>
</table><br>ಪ್ರತಿ ಮಾಹೆ ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರಿಗೆ ಗೌರವಧನವನ್ನು ಪಾವತಿಸಲಾಗುತ್ತಿದೆ.</td>
</tr>
</table>

**ಸಂಖ್ಯೆ:** ಮಮಇ 297 ಐಸಿಡಿ 2021

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.